**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಜಿಲ್ಲಾ ಯೋಜನಾ ಸಮಿತಿ ಹಾಗೂ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಗಳ ವೆಚ್ಚ ಭರಿಸಲು ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಹಾಗೂ ತಾಲ್ಲೂಕುಗಳಿಗೆ ಅನುದಾನ ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**

ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಇವರ ಪತ್ರ ಸಂಖ್ಯೆ:17/ಉಪಾ/ಕರಾವಿಯೋ&ಅಸ/2020-21, ದಿನಾಂಕ:05-12020.

**ಪ್ರಸ್ತಾವನೆ:**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 310ರನ್ವಯ ಪ್ರತಿ ಜಿಲ್ಲೆಯ ಸಮಗ್ರ ಅಭಿವೃದ್ಧಿಗಾಗಿ ಯೋಜನೆಯ ಕರಡನ್ನು ಸಿದ್ಧಪಡಿಸಲು ಪ್ರತಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಜಿಲ್ಲಾ ಯೋಜನಾ ಸಮಿತಿ ಹಾಗೂ ಪ್ರಕರಣ 309(ಡಿ)ರನ್ವಯ ಪ್ರತಿ ತಾಲ್ಲೂಕಿನಲ್ಲಿ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಯನ್ನು ರಚಿಸಲಾಗಿರುತ್ತದೆ. ಜಿಲ್ಲಾ ಯೋಜನಾ ಸಮಿತಿ ಹಾಗೂ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಯು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಲು ಅನುವಾಗುವಂತೆ ಸಭಾ ವೆಚ್ಚವನ್ನು ನಿರ್ವಹಿಸಲು ಪ್ರತಿ ಜಿಲ್ಲಾ ಯೋಜನಾ ಸಮಿತಿಗೆ ರೂ.1.00 ಲಕ್ಷಗಳು ಹಾಗೂ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ರೂ.0.50 ಲಕ್ಷಗಳ ಅನುದಾನದ ಅವಶ್ಯವಿರುತ್ತದೆ. ಈ ಅನುದಾನವನ್ನು 2020-21ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ ಅನುದಾನದ ಲೆಕ್ಕ ಶೀರ್ಷಿಕೆ:2515-00-101-0-09-103ರಡಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ಹಂಚಿಕೆ ಮಾಡಿರುವ ರೂ.300.00 ಲಕ್ಷಗಳಲ್ಲಿ ಜಿಲ್ಲಾ ಯೋಜನಾ ಸಮಿತಿಗೆ ರೂ.1.00ಲಕ್ಷಗಳು ಹಾಗೂ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ರೂ.0.50ಲಕ್ಷಗಳನ್ನು ಬಿಡುಗಡೆಗೊಳಿಸುವಂತೆ ಮೇಲೆ ಓದಲಾದ ಪತ್ರದನ್ವಯ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಜಿಲ್ಲಾ ಯೋಜನಾ ಸಮಿತಿ ಹಾಗೂ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಗಳು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಲು ಅನುವಾಗುವಂತೆ ಪ್ರತಿ ಜಿಲ್ಲಾ ಪಂಚಾಯತಿಗೆ ರೂ.1.00 ಲಕ್ಷಗಳಂತೆ 30 ಜಿಲ್ಲಾ ಪಂಚಾಯತಿಗಳಿಗೆ ರೂ.30.00 ಲಕ್ಷಗಳು ಹಾಗೂ ಪ್ರತಿ ತಾಲ್ಲೂಕು ಪಂಚಾಯತಿಗೆ ರೂ.0.50 ಲಕ್ಷಗಳಂತೆ 226 ತಾಲ್ಲೂಕು ಪಂಚಾಯತಿಗಳಿಗೆ ರೂ.113.00 ಲಕ್ಷಗಳಂತೆ ಒಟ್ಟಾರೆ, ರೂ.143.00 ಲಕ್ಷಗಳನ್ನು 2020-21ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ ಅನುದಾನದ ಲೆಕ್ಕ ಶೀರ್ಷಿಕೆ:2515-00-101-0-09-103ರಡಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ಹಂಚಿಕೆ ಮಾಡಿರುವ ರೂ.300.00 ಲಕ್ಷಗಳಲ್ಲಿ ಭರಿಸಿ, ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಖಜಾನೆ-2 ಮೂಲಕ ಬಿಡುಗಡೆಗೊಳಿಸಲು ಸರ್ಕಾರವು ನಿರ್ಧರಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 580 ಜಿಪಸ 2020, ಬೆಂಗಳೂರು, ದಿನಾಂಕ:09-02-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಗಣನೆಗೆ ತೆಗೆದುಕೊಂಡು, ಜಿಲ್ಲಾ ಯೋಜನಾ ಸಮಿತಿ ಹಾಗೂ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಅನುವಾಗುವಂತೆ

ಪ್ರತಿ ಜಿಲ್ಲಾ ಪಂಚಾಯತಿಗೆ ರೂ.1.00 ಲಕ್ಷಗಳಂತೆ 30 ಜಿಲ್ಲಾ ಪಂಚಾಯತಿಗಳಿಗೆ ರೂ.30.00 ಲಕ್ಷಗಳು ಹಾಗೂ ಪ್ರತಿ ತಾಲ್ಲೂಕು ಪಂಚಾಯತಿಗೆ ರೂ.0.50 ಲಕ್ಷಗಳಂತೆ 226 ತಾಲ್ಲೂಕು ಪಂಚಾಯತಿಗಳಿಗೆ ರೂ.113.00 ಲಕ್ಷಗಳಂತೆ ಒಟ್ಟಾರೆ, ರೂ.143.00 ಲಕ್ಷಗಳನ್ನು 2020-21ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ ಅನುದಾನದ ಲೆಕ್ಕ ಶೀರ್ಷಿಕೆ:2515-00-101-0-09-103ರಡಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ಹಂಚಿಕೆ ಮಾಡಿರುವ ರೂ.300.00 ಲಕ್ಷಗಳಲ್ಲಿ ಭರಿಸಿ, ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಖಜಾನೆ-2 ಮೂಲಕ ಬಿಡುಗಡೆಗೊಳಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 02 ಟಿಎಫ್‌ಪಿ 2020 ದಿನಾಂಕ:01-04-2020ರಲ್ಲಿ ಸಂಬಂಧಿಸಿದ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 09/02/21.
(ಬಿ. ನವೀನ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
09/02/21

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
5. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು (ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
6. ಜಿಲ್ಲಾ ಯೋಜನಾ ಸಮಿತಿ ಹಾಗೂ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಸದಸ್ಯರುಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ನಗರ ಸ್ಥಳೀಯ ಸಂಸ್ಥೆಗಳನ್ನೊಳಗೊಂಡಂತೆ).
7. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಉಪನಿರ್ದೇಶಕರು, ಟಿಎನ್‌ಎಂಸಿ, ಖನಿಜ ಭವನ, ಬೆಂಗಳೂರು.
9. ವಿಶೇಷಾಧಿಕಾರಿ, ಆರ್ಥಿಕ ಇಲಾಖೆ(ವೆಚ್ಚ-6), ವಿಧಾನಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
11. ಶಾಖಾ ರಕ್ಷಾಕಡತ/ ವೆಬ್‌ಸೈಟ್ ನಲ್ಲಿ ಪ್ರಕಟಿಸಲು.

ಪ್ರತಿಯನ್ನುಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
4. ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ.
5. ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿಮತ್ತುಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ.